Sahitya Akademi Award-2024, Prajavani, Dt.19.12.2024

# ಪ್ರೊ. ಕೆವಿಎನ್‌ಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ

ಪ್ರಜಾವಾಣಿ ವಾರ್ತೆ

ನವದೆಹಲಿ: ಹಿರಿಯ ಭಾಷಾ ವಿದ್ವಾಂಸ ಹಾಗೂ ಸಂಶೋಧಕ ಪ್ರೊ.ಕೆ.ವಿ.



ನಾರಾಯಣ ಅವರ 'ನುಡಿಗಳ ಅಳಿವು' ಕೃತಿಯು ಕೇಂದ್ರ ಸಾಹಿತ್ಯ ಅಕಾಡೆಮಿಯ 2024ನೇ ಸಾಲಿನ ಪ್ರಶಸ್ತಿಗೆ ಆಯ್ಕೆಯಾಗಿದೆ.

ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮಾಧವ್ ಕೌಶಿಕ್ ಅವರು ಬುಧವಾರ ಇಲ್ಲಿ ಪತ್ರಿಕಾಗೋಷ್ಠಿ ನಡೆಸಿ 21 ಭಾಷೆಗಳ ಪ್ರಶಸ್ತಿ ಪುರಸ್ಕೃತರ ಹೆಸರನ್ನು ಪ್ರಕಟಿಸಿದರು. ಪ್ರಶಸ್ತಿಯು ₹1 ಲಕ್ಷ ನಗದು, ಪ್ರಶಸ್ತಿ ಫಲಕ ಒಳಗೊಂಡಿದೆ. ನವದೆಹಲಿಯಲ್ಲಿ ಮಾರ್ಚ್ 8ರಂದು ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ಕನ್ನಡ ವಿಭಾಗಕ್ಕೆ ವಿದ್ವಾಂಸ ಓ.ಎಲ್. ನಾಗಭೂಷಣಸ್ವಾಮಿ, ಹಳೆಮನೆ ರಾಜಶೇಖರ್ ಹಾಗೂ ಸರಜೂ ಕಾಟ್ಕರ್ ಜ್ಯೂರಿಗಳಾಗಿದ್ದರು.

10ನೇ ಪುಟ ನೋಡಿ

# ಪ್ರೊ. ಕೆ.ವಿಎನ್‌ಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ

ಒಂದನೇ ಪುಟದಿಂದ...

ಪ್ರೊ.ಕೆ.ವಿ.ನಾರಾಯಣ ಅವರು ಮೂಲತಃ ಪಿರಿಯಾಪಟ್ಟಣದ ಕಂಪಲಾಪುರದವರು. ಆರಂಭಿಕ ಶಿಕ್ಷಣವನ್ನು ತಮ್ಮ ಊರಿನಲ್ಲಿ ಪಡೆದರು. ಉನ್ನತ ಶಿಕ್ಷಣಕ್ಕಾಗಿ ಬೆಂಗಳೂರಿನತ್ತ ಹೊರಟರು. ಸೆಂಟ್ರಲ್ ಕಾಲೇಜಿನಲ್ಲಿ ಕನ್ನಡ ಎಂ.ಎ.ಗೆ ಸೇರಿದರು. ಬೆಂಗಳೂರಿನ ನ್ಯಾಷನಲ್ ಕಾಲೇಜಿನಲ್ಲಿ ಅಧ್ಯಾಪನ ವೃತ್ತಿ ಆರಂಭಿಸಿದರು. ಅವರು ಬೆಂಗಳೂರು ವಿಶ್ವವಿದ್ಯಾಲಯದ ಜಿ.ಎಸ್. ಶಿವರುದ್ರಪ್ಪ ಅವರ ಮಾರ್ಗದರ್ಶನದಲ್ಲಿ ಆನಂದವರ್ಧನನ 'ಧ್ವನ್ಯಾಲೋಕ'ವನ್ನು ಅಧ್ಯಯನ ಮಾಡಿ ಪಿಎಚ್.ಡಿ ಪದವಿ ಪಡೆದರು.

1993ರಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯ ಅಸ್ತಿತ್ವಕ್ಕೆ ಬಂದ ಶುರುವಿನಲ್ಲಿ ಅವರು ರಿಜಿಸ್ಟ್ರಾರ್ ಆಗಿ ಕಾರ್ಯನಿರ್ವಹಿಸಿದರು. ಬಳಿಕ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು.

'ಕನ್ನಡ ಜಗತ್ತು-ಅರ್ಧ ಶತಮಾನ', 'ಭಾಷೆಯ ಸುತ್ತಮುತ್ತ', ಸಾಹಿತ್ಯ ತತ್ವ-ಬೇಂದ್ರೆ ದೃಷ್ಟಿ', 'ಧ್ವನ್ಯಾಲೋಕ-ಒಂದು ಅಧ್ಯಯನ', 'ನಮ್ಮೊಡನೆ ನಮ್ಮ ನುಡಿ', 'ಬೇರು ಕಾಂಡ ಚಿಗುರು', 'ಕನ್ನಡ ಶೈಲಿ ಕೈಪಿಡಿ' ಸೇರಿದಂತೆ 22ಕ್ಕೂ ಅಧಿಕ ಕೃತಿಗಳನ್ನು ರಚಿಸಿದ್ದಾರೆ.